# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

## ವಾರ್ಡ್ ನಂ.71 :ಹೆಗ್ಗನಹಳ್ಳಿ

**ದಿನಾಂಕ: 18.06.2022 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಬಿ.ಆರ್.ರವಿಕುಮಾರ್, ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್.ರವಿಕುಮಾರ್ | ನೋಡಲ್ ಅಧಿಕಾರಿ–ವಾರ್ಡ್ ನಂ.71 |
| 2 | ಜಯಂತ್‌ಕುಮಾರ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 71 |
| 3 | ನಂದೀಶ್ ಕುಮಾರ್ | ಸಹಾಯಕ ಅಭಿಯಂತರರು, ಬಿ,ಡಬ್ಲ್ಯೂ.ಎಸ್.ಎಸ್.ಬಿ |
| 4 | ಎನ್ ಜಗದೀಶ್ | – |
| 5 | ಸಂಜೀವಪ್ಪ | – |
| 6 | ಹೆಚ್ ಕೆ ಮಂಜುಳ | ಮೇಲ್ವಿಚಾರಕರು |
| 7 | ದಿವ್ಯ ಎಸ್ | ಪಿ.ಹೆಚ್.ಸಿ ಸಿಬ್ಬಂದಿ |
| 8 | ಕೆ ಎಲ್ ಮುರುಳೀಧರ್ | ಕಂದಾಯ ಪರಿವೀಕ್ಷಕರು |
| 9 | ಎನ್ ನಟರಾಜ್ | ಸದಸ್ಯರು |
| 10 | ಕೆ.ಸಿ ಶಿವರಾಮಯ್ಯ | ಸದಸ್ಯರು |
| 11 | ರಾಮಣ್ಣ | ಹಿರಿಯ ಆರೋಗ್ಯ ಪರಿವೀಕ್ಷಕರು |
| 12 | ಹೆಚ್ ಟಿ ಮುನಿರಾಜು | ಕಂದಾಯ ವಸೂಲಿಗಾರರು |
| 13 | ಗಂಗರೆಡ್ಡಿ | ಕಂದಾಯ ಪರಿವೀಕ್ಷಕರು |
| 14 | ಕೆ.ಎ ಉಮೇಶ | ಸದಸ್ಯರು |
| 15 | ಕುಮಾರ್ | |

**:ನಡಾವಳಿಯ ವರದಿ:**

➢ ಕಾರ್ಯದರ್ಶಿಗಳಾದ ಶ್ರೀ ಜಯಂತ್‌ಕುಮಾರ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

- **ವಿಷಯ ಸಂಖ್ಯೆ: 1 :–ವಾರ್ಡ್ ವ್ಯಾಪ್ತಿಯಲ್ಲಿ ಔಷಧಿ ಸಿಂಪಡಣೆ ಸಮರ್ಪಕವಾಗಿ ನಡೆಯುತ್ತಿಲ್ಲದಿರುವುದರ ಬಗ್ಗೆ**

ಸೊಳ್ಳೆ ಔಷಧಿ ಸಿಂಪಡಣೆ ಬಗ್ಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ ಪೂರ್ಣ ಮಾಹಿತಿ ನೀಡಲು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಿದ್ದು, ಸದರಿಯವರು ಮಾಹಿತಿಯನ್ನು ವಾರ್ಡ್ ಸಮಿತಿಯಲ್ಲಿ ತಿಳಿಸಿರುತ್ತಾರೆ.

**ವಿಷಯ ಸಂಖ್ಯೆ: 2 :- ಸರ್ಕಾರಿ ಆಸ್ತಿ ಮತ್ತು ಹಾಲಿನ ಬೂತ್ ಮಾಹಿತಿ ಒದಗಿಸುವ ಬಗ್ಗೆ**

ಸದಸ್ಯರಾದ ಉಮೇಶ್ ರವರು ಮಾತನಾಡಿ ವಾರ್ಡ್ 71ರ ವ್ಯಾಪ್ತಿಯಲ್ಲಿರುವ ಸರ್ಕಾರಿ ಆಸ್ತಿಗಳು & ಹಾಲಿನ ಬೂತ್ ಗಳ ವಿವರಗಳನ್ನು ನೀಡುವಂತೆ ಕೋರಿದರು.

ಇದಕ್ಕೆ ನೋಡಲ್ ಅಧಿಕಾರಿ ರವರು ಪ್ರತಿಕ್ರಿಯಿಸಿ ಸಭೆಯಲ್ಲಿ ಹಾಜರಿದ್ದ ಕಂದಾಯ ಅಧಿಕಾರಿಗಳಿಗೆ ಸದರಿಯವರಿಗೆ ಮಾಹಿತಿ ನೀಡಲು ಸೂಚಿಸಿದರು.

**ವಿಷಯ ಸಂಖ್ಯೆ: 3 :- ಕಾಂಕ್ರೀಟ್ ರಸ್ತೆ ಅಭಿವೃದ್ಧಿಸುವ ಬಗ್ಗೆ**

ಸದಸ್ಯರಾದ ನಟರಾಜ್ ರವರು ಮಾತನಾಡಿ, ಗೋವಿಂದಪ್ಪ ಬೇಕರಿ ಹಿಂಭಾಗದ ರಸ್ತೆಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ವತಿಯಿಂದ ಒಳಚರಂಡಿ ಅಳವಡಿಸಲು ಅಗೆದಿದ್ದ ರಸ್ತೆಯನ್ನು ದುರಸ್ಥಿ ಮಾಡಿರುವುದಿಲ್ಲ. ಈ ಹಿಂದಿನ ಸಭೆಯಲ್ಲಿ ಈ ವಿಷಯವನ್ನು ಪ್ರಸ್ತಾಪಿಸಿದ್ದರೂ ಸಹ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ. ಇದರಿಂದಾಗಿ ಸಾರ್ವಜನಿಕರಿಗೆ ತೊಂದರೆಯಾಗಿದ್ದು, ರಸ್ತೆ ದುರಸ್ಥಿಪಡಿಸುವಂತೆ ಮನವಿ ಸಲ್ಲಿಸಿದರು.

ಇದಕ್ಕೆ ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಮಾತನಾಡಿ ಸದರಿ ರಸ್ತೆಯಲ್ಲಿ ವೆಟ್ ಮಿಕ್ಸ್ ಅಳವಡಿಸಲಾಗಿದೆ, ಅತೀ ಶೀಘ್ರದಲ್ಲಿಯೇ Restoration ಮಾಡಲಾಗುವುದು ಎಂದು ತಿಳಿಸಿದರು.

**ವಿಷಯ ಸಂಖ್ಯೆ: 4 :-ರಸ್ತೆಗುಂಡಿಗಳ ಬಗ್ಗೆ**

ವಾರ್ಡ್ 71ರ ವ್ಯಾಪ್ತಿಯಲ್ಲಿನ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಮುಚ್ಚುವ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ವಾರ್ಡ್ 71 ರ ವ್ಯಾಪ್ತಿಯ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಾಲಿಕೆಯ Fix My Street App ನ್ನಲ್ಲಿ ಪ್ರತಿಯೊಂದು ರಸ್ತೆಗುಂಡಿಯ ಚಿತ್ರಸಹಿತ ವಿವರಗಳನ್ನು ದಾಖಲಿಸಿದ್ದು, ಈಗಾಗಲೇ ವಾರ್ಡಿನ ಹಲವು ಕಡೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಮುಚ್ಚಲಾಗಿದೆ ಹಾಗೂ ಇನ್ನುಳಿದ ಕಡೆಗಳಲ್ಲಿ ರಸ್ತೆಗುಂಡಿಗಳನ್ನು ಮುಚ್ಚುವ ಕಾಮಗಾರಿಯು ಪ್ರಗತಿಯಲ್ಲಿದ್ದು, ಎಂದು ತಿಳಿಸಿದರು.

- **ವಿಷಯ ಸಂಖ್ಯೆ: 5 :-ಶುದ್ಧ ಕುಡಿಯುವ ನೀರಿನ ಘಟಕವನ್ನು ಸ್ಥಾಪಿಸಲು ಕೋರಿ.**

ಸದಸ್ಯರಾದ ಉಮೇಶ್ ರವರು ಮಾತನಾಡಿ, ವಾರ್ಡ್ ನಂ.71ರ ವ್ಯಾಪ್ತಿಯ ಲಕ್ಷ್ಮಣನಗರದಲ್ಲಿ ಶುದ್ಧ ಕುಡಿಯುವ ನೀರಿನ ಘಟಕವನ್ನು ಸ್ಥಾಪಿಸಲು ಮನವಿ ಮಾಡಿದರು.

ಇದಕ್ಕೆ ವಾರ್ಡ್ ನಂ.71ರ ಸಹಾಯಕ ಅಭಿಯಂತರರು ರವರು ಮಾತನಾಡಿ, ಲಕ್ಷ್ಮಣನಗರದಲ್ಲಿ ಶುದ್ಧ ಕುಡಿಯುವ ನೀರಿನ ಘಟಕವನ್ನು ಸ್ಥಾಪಿಸಲು ಪ್ರಸಕ್ತ ಸಾಲಿನಲ್ಲಿ ಅನುದಾನ ಲಭ್ಯವಿರುವುದಿಲ್ಲ. ಮುಂದಿನ ಕ್ರಿಯಾ ಯೋಜನೆಯಲ್ಲಿ ಈ ವಿಷಯವಾಗೀ ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.71ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಜಯಂತ್‌ಕುಮಾರ್‌ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ ನಂ.71, ಹೆಗ್ಗನಹಳ್ಳಿ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ವಾರ್ಡ್ ಸಮಿತಿ ಅಧ್ಯಕ್ಷರು**
**ಹಾಗೂ ವಾರ್ಡ್‌ನ ನೋಡಲ್‌ಅಧಿಕಾರಿ**
**ವಾರ್ಡ್ ನಂ.71, ಹೆಗ್ಗನಹಳ್ಳಿ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ